**All India Radio: Bangalore**
**Regional Bulletin In Kannada**
**09.09.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.09.2025 / 6.40 p.m.**

**<><><><>**

ಮುಖ್ಯಾಂಶಗಳು :

- ಉಪರಾಷ್ಟ್ರಪತಿ ಚುನಾವಣೆ; ಮತ ಎಣಿಕೆ ಪ್ರಗತಿಯಲ್ಲಿ
- ಮದ್ದೂರು ಪ್ರಕರಣ ; ಸಚಿವ ಚೆಲುವರಾಯ ಸ್ವಾಮಿ ನೇತೃತ್ವದಲ್ಲಿ ಸಮಾಜದ ಮುಖಂಡರ ಜೊತೆ ಶಾಂತಿ ಸಭೆ ; ಮದ್ದೂರಿಗೆ ನಾಳೆ ಬಿಜೆಪಿ ನಿಯೋಗ ಭೇಟಿ
- ಶಾಸಕರಿಗೆ ನೀಡಿದಂತೆ ಪರಿಷತ್ ಸದಸ್ಯರಿಗೂ ಅನುದಾನ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
- ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಇಲ್ಲ - ಸಚಿವ ಕೆ.ಜೆ. ಜಾರ್ಜ್

<><><><>

ಉಪರಾಷ್ಟ್ರಪತಿ ಚುನಾವಣೆಗೆ ಮತದಾನ ಪ್ರಕ್ರಿಯೆ ಇತ್ತೀಚೆಗಷ್ಟೆ ಅಂತ್ಯವಾಗಿದೆ. ಮತದಾನ ಬೆಳಿಗ್ಗೆ ೧೦ ಗಂಟೆಯಿಂದ ಸಂಜೆ ೫ ಗಂಟೆಯವರೆಗೆ ನಡೆಯಿತು. ಮತ ಎಣಿಕೆ ಪ್ರಕ್ರಿಯೆ ನಡೆಯುತ್ತಿದೆ. ಉಪರಾಷ್ಟ್ರಪತಿ ಸ್ಥಾನಕ್ಕಾಗಿ ಎನ್‌ಡಿಎ ಅಭ್ಯರ್ಥಿ ಹಾಗೂ ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಮತ್ತು ಐಎನ್‌ಡಿಐಎ ಮೈತ್ರಿಕೂಟದ ಅಭ್ಯರ್ಥಿ ಹಾಗೂ ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ನಡುವೆ ಸ್ಪರ್ಧೆ ನಡೆಯುತ್ತಿದೆ. ಭಾರತದ ಮುಂದಿನ ಉಪರಾಷ್ಟ್ರಪತಿಯನ್ನು ಆಯ್ಕೆ ಮಾಡುವ ಸಲುವಾಗಿ ಸಂಸತ್ತಿನ ಎರಡೂ ಸದನಗಳ ಸದಸ್ಯರು ತಮ್ಮ ಮತವನ್ನು ಚಲಾಯಿಸಿದರು.

<><><><>

ಮಂಡ್ಯ ಜಿಲ್ಲೆಯ ಮದ್ದೂರು ನಗರದಲ್ಲಿ ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ನಡೆದ ಕಲ್ಲು ತೂರಾಟ ಹಾಗೂ ಪ್ರತಿಭಟನೆ ಸಂದರ್ಭದಲ್ಲಿ ನಡೆದ ಲಾಠಿ ಚಾರ್ಜ್ ಖಂಡಿಸಿ ಇಂದು ಕರೆ ನೀಡಿದ್ದ ಮದ್ದೂರು ನಗರ ಬಂದ್ ಸಂಪೂರ್ಣ ಯಶಸ್ವಿಯಾಗಿದ್ದು, ಯಾವುದೇ ಅಹಿತಕರ ಘಟನೆ ನಡೆಯದೇ ಶಾಂತಿಯುತವಾಗಿ ಮುಕ್ತಾಯಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅಧ್ಯಕ್ಷತೆಯಲ್ಲಿ ಸಮಾಜದ ಮುಖಂಡರ ನಡುವೆ ಶಾಂತಿ ಸಭೆಯಲ್ಲಿ ಸಚಿವರು, ಸಮಾಜದ ಮುಖಂಡರು ನಗರದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ನೇತೃತ್ವ

ವಹಿಸಬೇಕೆಂದು ಮನವಿ ಮಾಡಿದ್ದಾರೆ. ಮದ್ದೂರಿನಾದ್ಯಂತ ನಿಷೇಧಾಜ್ಞೆ ಮುಂದುವರೆದಿದ್ದು, ಮದ್ಯದ ಅಂಗಡಿಗಳನ್ನು ಮುಚ್ಚಲಾಗಿದೆ. ಪ್ರಚೋದನೆ ನೀಡುವ ಕಿಡಿಗಳ ಮೇಲೆ ತೀವ್ರ ನಿಗಾ ವಹಿಸಲಾಗಿದೆ. ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಬಂದೋಬಸ್ತ್ ಏರ್ಪಡಿಸಲಾಗಿದ್ದು, ೪ ಜನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮೂರು ಜನ ಎಎಸ್ಪಿಗಳು, ೧೫ ಜನ ಡಿವೈ ಎಸ್‌ಪಿಗಳು, ೩೦ ಇನ್‌ಸ್ಪೆಕ್ಟರ್ ಗ್ರೇಡ್‌ನ ಅಧಿಕಾರಿಗಳು ಸೇರಿದಂತೆ ೮೦೦ ಕ್ಕೂ ಅಧಿಕ ಪೋಲಿಸರನ್ನು ನಿಯೋಜಿಸಲಾಗಿದ್ದು, ದಕ್ಷಿಣ ವಲಯ ಐಜಿಪಿ ಬೋರಲಿಂಗಯ್ಯ ಸ್ಥಳದಲ್ಲಿ ಮೊಕ್ಕಾಂ ಹೂಡಿದ್ದಾರೆ. ನಾಳೆ ಆರ್.ಅಶೋಕ್ ಮತ್ತು ಬಿ.ವೈ . ವಿಜಯೇಂದ್ರ ನೇತೃತ್ವದ ನಿಯೋಗ ಮದ್ದೂರಿಗೆ ಭೇಟಿ ನೀಡಲಿದೆ. ಈ ನಡುವೆ ಬಿಜೆಪಿ ಮಾಜಿ ಉಪಮುಖ್ಯಮಂತ್ರಿ ಅಶ್ವತ್ಥ್ ನಾರಾಯಣ್ ಅವರ ನೇತೃತ್ವದಲ್ಲಿ ೭ ಜನ ಸದಸ್ಯರ ಸತ್ಯ ಶೋಧನಾ ತಂಡವನ್ನು ರಚಿಸಿದೆ. ಈ ಸಮಿತಿಯು ಘಟನಾ ಸ್ಥಳಕ್ಕೆ ತೆರಳಿ ಒಂದು ವಾರದೊಳಗೆ ವರದಿ ಸಲ್ಲಿಸಲಿದೆ.

<><><>

ಕರ್ನಾಟಕವು ಭಾರತದ ಜಾಗತಿಕ ಸಾಮರ್ಥ್ಯ ಕೇಂದ್ರ-ಜಿಸಿಸಿಗಳ ಭೂದೃಶ್ಯವನ್ನು ಸತತವಾಗಿ ಮುನ್ನಡೆಸುತ್ತಲೇ ಇದ್ದು, ಕರ್ನಾಟಕವು ದೇಶದ ಜಿಸಿಸಿಗಳಲ್ಲಿ ಶೇಕಡ ೩೦ಕ್ಕಿಂತ ಹೆಚ್ಚು ಉದ್ಯಮಗಳಿಗೆ ನೆಲೆಯಾಗಿದೆ, ಬೆಂಗಳೂರು ನಗರವೊಂದೇ ಈ ವಲಯದಲ್ಲಿ ೬ ಲಕ್ಷಕ್ಕೂ ಹೆಚ್ಚು ವೃತ್ತಿಪರರಿಗೆ ಉದ್ಯೋಗ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಳೆದ ಮೂರು ವರ್ಷಗಳಲ್ಲಿ, ಭಾರತದಲ್ಲಿ ಸ್ಥಾಪಿಸಲಾದ ಎಲ್ಲಾ ಹೊಸ ಜಿಸಿಸಿಗಳಲ್ಲಿ ಶೇಕಡಾ ೪೩ ಉದ್ಯಮಗಳು ಕರ್ನಾಟಕವನ್ನು ಆಯ್ಕೆ ಮಾಡಿಕೊಂಡಿವೆ, ಇದು ಜಾಗತಿಕ ಉದ್ಯಮಗಳು ರಾಜ್ಯದ ಪರಿಸರ ವ್ಯವಸ್ಥೆಯ ಮೇಲೆ ಇರಿಸಿರುವ ನಂಬಿಕೆಯನ್ನು ಒತ್ತಿಹೇಳುತ್ತದೆ ಎಂದು ಅವರು ತಿಳಿಸಿದರು. ಕರ್ನಾಟಕ ಸರ್ಕಾರದ ಮಾಹಿತಿ ಹಾಗೂ ತಂತ್ರಜ್ಞಾನ ಇಲಾಖೆ ಹೊರ ತಂದ ಕ್ಯಾಟಲಿಸ್ಟ್ ಕೈಪಿಡಿಯನ್ನು ಅನಾವರಣಗೊಳಿಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೊಸ ಮಧ್ಯಮ-ಮಾರುಕಟ್ಟೆ ವರದಿಯೊಂದಿಗೆ ಜಿಸಿಸಿ ಪ್ರಾಬಲ್ಯವನ್ನು ಎತ್ತಿ ತೋರಿಸುತ್ತದೆ ಎಂದು ಪ್ರಶಂಸಿಸದರು.

<><><>

ಹಲವು ವಸ್ತುಗಳ ಜಿಎಸ್‌ಟಿ ದರ ಇಳಿಸುವ ಮೂಲಕ ದೇಶದ ಜನರಿಗೆ ದೀಪಾವಳಿ ಉಡುಗೊರೆ ಕೊಡುವುದಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ತಿಳಿಸಿದಂತೆ, ಜಿಎಸ್‌ಟಿ ಪರಿಷ್ಕರಣೆ ಮಾಡಿ

ಕೇಂದ್ರ ಸರ್ಕಾರ ದೇಶವಾಸಿಗಳಿಗೆ ದೊಡ್ಡ ಉಡುಗೊರೆ ನೀಡಿದೆ ಎಂದು ಉತ್ತರಕನ್ನಡದ ನ್ಯಾಯವಾದಿ ಸದಾನಂದ ಭಟ್ ಹೇಳಿದ್ದಾರೆ. ಜಿಎಸ್‌ಟಿ ಪರಿಷ್ಕರಣೆಯಿಂದ ಮಧ್ಯಮ ಹಾಗೂ ಕೆಳ ವರ್ಗದವರಿಗೆ ತುಂಬಾ ಅನುಕೂಲವಾಗಿದ್ದು, ಅವರ ಕೊಳ್ಳುವ ಸಾಮರ್ಥ್ಯ ಹೆಚ್ಚಿಸಿದೆ. ಸಣ್ಣ ವ್ಯಾಪಾರಿಗಳು, ಸಣ್ಣ ಕೈಗಾರಿಕೆಗಳಿಗೆ ಹೆಚ್ಚಿನ ಶಕ್ತಿ ನೀಡಿದಂತಾಗಿದೆ. ವಿಶೇಷವಾಗಿ ಕ್ಯಾನ್ಸರ್, ಅಪರೂಪದ ಕಾಯಿಲೆಗಳು ಮತ್ತು ಇತರ ತೀವ್ರ ದೀರ್ಘಕಾಲದ ಕಾಯಿಲೆಗಳ ಚಿಕಿತ್ಸೆಯಲ್ಲಿ ಬಳಸುವ ಜೀವರಕ್ಷಕ ಔಷಧಿಗಳ ಮೇಲಿನ ಜಿಎಸ್‌ಟಿಯನ್ನು ಶೇಕಡಾ ಶೂನ್ಯಕ್ಕೆ ಇಳಿಸಲಾಗಿದೆ ಎಂದು ಅವರು ತಿಳಿಸಿದರು.

**ಧ್ವನಿ : ಸದಾನಂದ ಭಟ್ , ( ೩೦ ಸೆಕೆಂಡುಗಳು)**

<><><>

ಮದ್ದೂರು ಪ್ರಕರಣಕ್ಕೆ ಸಂಬಂಧಿಸಿದಂತೆ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಮಾಜದಲ್ಲಿ ಶಾಂತಿ ಕದಡುವುದೇ ಬಿಜೆಪಿಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಹದಗೆಟ್ಟಿರುವುದಾಗಿ ಕೇಂದ್ರ ಗೃಹ ಸಚಿವರಿಗೆ ದೂರು ನೀಡಿರುವ ಕುರಿತಂತೆ ಪ್ರತಿಕ್ರಿಯಿಸಿ ಮಣಿಪುರದಲ್ಲಿ ನಡೆದ ಹಿಂಸಾಚಾರದ ಬಗ್ಗೆ ಯಾವುದೇ ಬಿಜೆಪಿಯವರು ಧ್ವನಿ ಎತ್ತಲಿಲ್ಲವೇಕೆ ಎಂದು ಪ್ರಶ್ನಿಸಿದ್ದಾರೆ. ಶಾಸಕರು ತಮ್ಮ ಕ್ಷೇತ್ರಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಆಯವ್ಯಯದಲ್ಲಿ ೮ ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿರಿಸಲಾಗಿದೆ. ಶಾಸಕರಿಗೆ ನೀಡಿದಂತೆ ಪರಿಷತ್ ಸದಸ್ಯರಿಗೂ ಅನುದಾನ ನೀಡಲು ಪರಿಶೀಲಿಸುವುದಾಗಿ ಆಶ್ವಾಸನೆ ನೀಡಿದ್ದಾರೆ.

<><><>

ರಾಜ್ಯದಲ್ಲಿ ವಿದ್ಯುತ್ ಸಮಸ್ಯೆ ಇಲ್ಲ ಎಂದು ಇಂಧನ ಸಚಿವ ಕೆ. ಜೆ. ಜಾರ್ಜ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಹಗಲು ವೇಳೆ ರೈತರಿಗೆ ವಿದ್ಯುತ್ ನೀಡಲಾಗುವುದು ಎಂದು ಸ್ಪಷ್ಟ ಪಡಿಸಿದ್ದಾರೆ. ಕೆಲಸವನ್ನು ಆದಷ್ಟು ಬೇಗನೆ ಮಾಡ್ತವೆ ಸಮರ್ಪಕ ವಿದ್ಯುತ್ ಪೂರೈಕೆಗಾಗಿ ಎಲ್ಲಾ ಕ್ರಮ ಕೈಗೊಂಡಿದ್ದೇವೆಂದು ಹೇಳಿದ್ದಾರೆ. ಪ್ರತಿ ತಿಂಗಳು ೬೦೦ ಕೋಟಿ ರೂಪಾಯಿ ಗೃಹಜ್ಯೋತಿ ಹಣ ಸರ್ಕಾರ ನೀಡ್ತಿದೆ. ಸರ್ಕಾರದಿಂದ ಯಾವುದೇ ಬಾಕಿ ಉಳಿದಿಲ್ಲಾ ರಾಜ್ಯದ ಜನತೆಗೆ ವಿದ್ಯುತ್ ಕೊರತೆ ಇಲ್ಲದಂತೆ ನೋಡಿಕೊಂಡಿದೆ ಎಂದು ಜಾರ್ಜ್ ಹೇಳಿದರು

**ಧ್ವನಿ : ಇಂಧನ ಸಚಿವ ಕೆಜೆ ಜಾರ್ಜ್ ( ೩೦ ಸೆಕೆಂಡುಗಳು)**

<><><><>

ಮಲೆನಾಡಿಗೆ ಸೀಮಿತವಾಗಿದ್ದ ಗೋಡಂಬಿಯನ್ನು ಬಯಲುಸೀಮೆ ಜಿಲ್ಲೆಯಾದ ಕೋಲಾರದಲ್ಲಿ ಬೆಳೆದ ರೈತ ಈಗ ಕೈತುಂಬ ಆದಾಯಗಳಿಸುತ್ತಿದ್ದಾರೆ. ಕೋಲಾರ ತಾಲ್ಲೂಕಿನ ಚೆನ್ನಸಂದ್ರ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾಮಾಂಡಹಳ್ಳಿ ಗ್ರಾಮದ ಸುರೇಶ್ ಎಂಬ ರೈತ, ಅತೀ ಕಡಿಮೆ ಖರ್ಚಿನಲ್ಲಿ ಗೋಡಂಬಿ ಬೆಳೆದು ಮಾದರಿಯಾಗಿದ್ದಾರೆ. ತೋಟಗಾರಿಕೆ ಇಲಾಖೆ ಅಧಿಕಾರಿಗಳಿಂದ ಈ ಬಗ್ಗೆ ಹೆಚ್ಚಿನ ಮಾಹಿತಿ ಪಡೆದು, ವಿ-೪ ಹಾಗೂ ಉಳ್ಳಾಲ-೧ ತಳಿಯ ೪೦೦ಕ್ಕೂ ಹೆಚ್ಚು ಗಿಡಗಳನ್ನು ತಮ್ಮ ನಾಲ್ಕು ಎಕರೆ ಭೂಮಿಯಲ್ಲಿ ತಂದು ನಾಟಿ ಮಾಡಿದ್ದಾರೆ. ನರೇಗಾದಡಿಯಲ್ಲಿ ಸುರೇಶ್‌ರವರಿಗೆ ಕೂಲಿ ಹಾಗೂ ಸಾಮಗ್ರಿ ವೆಚ್ಚ ಸೇರಿ ೭೫ ಸಾವಿರ ಪಾವತಿಯಾಗಿದೆ. ಗೇರು ಅಲ್ಲದೆ ಮಿಶ್ರ ಬೆಳೆಯಾಗಿ ನೇರಳೆ ಸೇರಿದಂತೆ ವಿವಿಧ ಬೆಳೆ ಬೆಳೆದಿದ್ದಾರೆ.

**ಧ್ವನಿ - ರೈತ ಸುರೇಶ್, ಕಾಮಾಂಡಹಳ್ಳಿ ( ೩೧ ಸೆಕೆಂಡುಗಳು)**

<><><><>

ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ೫೯ನೇ ಸಂಸ್ಥಾಪನಾ ದಿನವನ್ನು ಇಂದು ಸಂಸ್ಥೆಯ ಡಾ.ಜಿ.ಎಸ್.ರಂಧಾವಾ ಸಭಾಂಗಣದಲ್ಲಿ ಆಚರಿಸಲಾಯಿತು. ಈ ಸಮಾರಂಭದಲ್ಲಿ ಕೃಷಿ ವಿಜ್ಞಾನಿಗಳ ನೇಮಕಾತಿ ಮಂಡಳಿ ಅಧ್ಯಕ್ಷ ಡಾ. ಸಂಜಯ್ ಕುಮಾರ್, ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ವಿ.ವೆಂಕಟಸುಬ್ರಮಣಿಯನ್ ಸೇರಿದಂತೆ ಹಲವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

<><><><>

ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಇದೇ ೧೨ ರಂದು ಚಿಕ್ಕಬಳ್ಳಾಪುರದ ಎಸ್‌ಜೆಸಿಐಟಿ ಕಾಲೇಜಿನಲ್ಲಿ "ಶಿಕ್ಷಣ ಮಾನವೀಕರಣದತ್ತ ಒಂದು ಹೆಜ್ಜೆ" ಎಂಬ ವಿಷಯದ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣವೊಂದನ್ನು ಹಮ್ಮಿಕೊಂಡಿದ್ದು, ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಉದ್ಘಾಟಿಸಲಿದ್ದಾರೆ. ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಭಾಗವಹಿಸಲಿದ್ದು, ಎನ್‌ಇಪಿ ಮಂಡಳಿ ಸದಸ್ಯ ಹಾಗೂ ವಿಶ್ರಾಂತ ಕುಲಪತಿ ತೇಜಸ್ವಿ ಕಟ್ಟೀಮನಿ ದಿಕ್ಸೂಚಿ ಭಾಷಣ ಮಾಡಲಿದ್ದಾರೆ. ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ನಿರಂಜನವಾನಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಪ್ರಕಟಣೆ ತಿಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>